## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಜೀತವಿಮುಕ್ತರ ಪುನರ್ವಸತಿ ಕಾರ್ಯಕ್ರಮವನ್ನು ಸಂಪನ್ಮೂಲ ಕ್ರೋಢೀಕರಣ ಮುಖಾಂತರ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದಲ್ಲಿ ತ್ರಿಸದಸ್ಯ ಸಮಿತಿಯನ್ನು ರಚಿಸುವ ಬಗ್ಗೆ.

ಓದಲಾಗಿದೆ:-1.ದಿನಾಂಕ.9-10 ಅಕ್ಟೋಬರ್ 2003 ರಂದು ಭಾರತೀಯ ವಿಶ್ವ ವಿದ್ಯಾಲಯದ ರಾಷ್ಟ್ರೀಯ ಕಾನೂನು ಶಾಲೆ, ಬೆಂಗಳೂರು ಇಲ್ಲಿ ಜೀತಪದ್ಧತಿ / ಬಾಲಕಾರ್ಮಿಕ ನಿರ್ಮೂಲನೆ ಕುರಿತು ನಡೆದ 2 ದಿನಗಳ ಕಾರ್ಯಾಗಾರದ ಶಿಫಾರಸ್ಸುಗಳು.

2.ದಿನಾಂಕ.28.7.2004ರಂದು ಶ್ರೀ.ಕೆ.ಆರ್.ವೇಣುಗೋಪಾಲ್,ಭಾಆಸೇ (ನಿವೃತ್ತ), ವಿಶೇಷ ವರದಿಗಾರರು, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

****

**ಪ್ರಸ್ತಾವನೆ:**

ರಾಜ್ಯದಲ್ಲಿ ಜೀತಪದ್ಧತಿ ಹಾಗೂ ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡುವ ಸಂಬಂಧ ವಿವಿಧ ಕಾಯ್ದೆಗಳ ಅನುಷ್ಠಾನ ಕುರಿತು ಜಿಲ್ಲಾ ಮಟ್ಟದ ಹಾಗೂ ಹಲವು ಉಪವಿಭಾಗೀಯ ಮಟ್ಟದ ಕಂದಾಯ, ಆರಕ್ಷಕ, ಕಾರ್ಮಿಕ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗಳ ಅಧಿಕಾರಿಗಳಿಗೆ 2 ದಿನಗಳ ಜಾಗೃತ ಕಾರ್ಯಾಗಾರವನ್ನು ಬೆಂಗಳೂರಿನ ಭಾರತೀಯ ವಿಶ್ವವಿದ್ಯಾಲಯದ ರಾಷ್ಟ್ರೀಯ ಕಾನೂನು ಶಾಲೆಯಲ್ಲಿ ದಿನಾಂಕ.9-10 ಅಕ್ಟೋಬರ್ 2003 ರಂದು ಏರ್ಪಡಿಸಲಾಗಿತ್ತು. ಸದರಿ ಕಾರ್ಯಾಗಾರದಲ್ಲಿ "ಜೀತವಿಮುಕ್ತರಿಗೆ ಹಾಗೂ ಬಾಲಕಾರ್ಮಿಕವಿಮುಕ್ತರಿಗೆ ಪುನರ್ವಸತಿ ಸೌಲಭ್ಯಗಳನ್ನು ಸಕಾಲದಲ್ಲಿ ಒದಗಿಸಲು ವಿವಿಧ ಯೋಜನೆಗಳ ಅಡಿಯಲ್ಲಿ ಲಭ್ಯವಿರುವ ಅನುದಾನವನ್ನು ಕ್ರೋಢೀಕರಣ ಮಾಡುವ ಉದ್ದೇಶಕ್ಕಾಗಿ, ಜಿಲ್ಲಾಧಿಕಾರಿಯ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತಿಯ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯನ್ನು ಸದಸ್ಯರುಗಳನ್ನಾಗಿ ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸಬೇಕು" ಎಂಬ ಅಭಿಪ್ರಾಯವು ಶಿಫಾರಸ್ಸಾಗಿ ಮೂಡಿಬಂದಿರುತ್ತದೆ.

ಮೇಲ್ಕಂಡ ಶಿಫಾರಸ್ಸನ್ನು ಅನುಷ್ಠಾನಗೊಳಿಸುವ ಸಲುವಾಗಿ ದಿನಾಂಕ.28.7.2004 ರಂದು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ವಿಶೇಷ ವರದಿಗಾರರಾದ ಶ್ರೀ.ಕೆ.ಆರ್.ವೇಣುಗೋಪಾಲ್, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ "ಜಿಲ್ಲಾ ಮಟ್ಟದಲ್ಲಿ ಜಾಗೃತ / ಪರಾಮರ್ಶಕ ಸಮಿತಿಗಳು ಇದ್ದಾಗ್ಯೂ, ಜೀತವಿಮುಕ್ತರ ಪುನರ್ವಸತಿ ಕಾರ್ಯವನ್ನು ತುರ್ತಾಗಿ ಆದ್ಯತೆ ಮೇಲೆ ಕೈಗೊಳ್ಳುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತಿಯ ಅಧ್ಯಕ್ಷರ ನೇತೃತ್ವದಲ್ಲಿ ಜಿಲ್ಲಾಧಿಕಾರಿಯನ್ನು ಸದಸ್ಯರನ್ನಾಗಿ ಹಾಗೂ ಜಿಲ್ಲಾ ಪಂಚಾಯತಿಯ



ಜಿಲ್ಲಾ ಕಾರ್ಮಿಕ ಅಧಿಕಾರಿ
ಹಾಸನ ಜಿಲ್ಲೆ
ಹಾಸನ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯನ್ನು ಸದಸ್ಯ-ಕಾರ್ಯದರ್ಶಿಯನ್ನಾಗಿ ಒಳಗೊಂಡಂತೆ ತ್ರಿಸದಸ್ಯ ಸಮಿತಿಯನ್ನು ರಚಿಸುವಂತೆ" ತೀರ್ಮಾನವಾಗಿರುತ್ತದೆ.

ಹಂಗರಹಳ್ಳಿ ಜೀತಪ್ರಕರಣದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಕೈಗೊಳ್ಳಲಾದ ಮರು ಸಮೀಕ್ಷೆಯಿಂದ 2040 ಜೀತದಾಳುಗಳು ಪತ್ತೆಯಾಗಿದ್ದು ಇವರನ್ನು ಜೀತಪದ್ಧತಿಯಿಂದ ವಿಮುಕ್ತಗೊಳಿಸಲಾಗಿದೆ. ಈ ಪೈಕಿ 1890 ಜೀತವಿಮುಕ್ತರುಗಳಿಗೆ ಪುನರ್ವಸತಿ ಒದಗಿಸಲು ಕೇಂದ್ರ ಪುರಸ್ಕೃತ ಕಾರ್ಯಯೋಜನೆಯಡಿ ರೂ.3.708 ಕೋಟಿಗಳ ಅನುದಾನವನ್ನು ಒದಗಿಸ ಲಾಗಿದೆ. ಜೀತವಿಮುಕ್ತರುಗಳ ಪುನರ್ವಸತಿ ಕಾರ್ಯವನ್ನು ಸಕಾಲದಲ್ಲಿ ಕೈಗೊಳ್ಳದಿದ್ದಲ್ಲಿ ಅವರುಗಳು ಜೀತಪದ್ಧತಿಗೆ ಮರಳುವ ಸಂಭವವಿರುವುದರಿಂದ, ಅದನ್ನು ತಡೆಗಟ್ಟುವ ನಿಟ್ಟಿನಲ್ಲಿ ಜೀತವಿಮುಕ್ತರುಗಳಿಗೆ ಪುನರ್ವಸತಿ ಸೌಲಭ್ಯಗಳನ್ನು ಸಮರೋಪಾದಿಯಲ್ಲಿ ಒದಗಿಸುವುದು ಅತ್ಯವಶ್ಯಕವಾಗಿರುತ್ತದೆ. ಕೇಂದ್ರ ಪುರಸ್ಕೃತ ಕಾರ್ಯಯೋಜನೆ ಅಡಿ ಕೇಂದ್ರ ಸರ್ಕಾರದಿಂದ ಅನುದಾನ ಪಡೆದು ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲು ಕಾಲಾವಕಾಶ ಬೇಕಾಗಿದ್ದು, ಆದರೆ ಜೀತವಿಮುಕ್ತರುಗಳಿಗೆ ಜಿಲ್ಲಾ ಮಟ್ಟದಲ್ಲಿ ಲಭ್ಯವಿರುವ ಯೋಜನೆಗಳ ಅಡಿಯಲ್ಲಿ ಪುನರ್ವಸತಿ ಸೌಲಭ್ಯಗಳನ್ನು ತುರ್ತಾಗಿ ಒದಗಿಸಬಹುದಾಗಿರುತ್ತೆ. ಆದುದರಿಂದ ಹಾಲಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಅಡಿಯಲ್ಲಿ ಲಭ್ಯವಿರುವ ಅನುದಾನವನ್ನು ಕ್ರೋಢೀಕರಿಸಿ, ಜೀತವಿಮುಕ್ತರುಗಳಿಗೆ ಪುನರ್ವಸತಿ ಸೌಲಭ್ಯಗಳನ್ನು ಒದಗಿಸುವ ಸಂಬಂಧ ತುರ್ತು ಕ್ರಮ ಕೈಗೊಳ್ಳಲು ಜಿಲ್ಲಾ ಮಟ್ಟದಲ್ಲಿ ಸಮಿತಿಯೊಂದನ್ನು ರಚಿಸಲು ಸರ್ಕಾರವು ಉದ್ದೇಶಿಸಿರುತ್ತೆ. ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ.ಗ್ರಾಅಪ.13.ಆರ್‌ಬಿಎಲ್.2003 ದಿನಾಂಕ.06.09.2004,ಬೆಂಗಳೂರು**

1976ರ ಜೀತಗಾರಿಕೆ ಪದ್ಧತಿ (ನಿರ್ಮೂಲನೆ) ಕಾಯ್ದೆ ಹಾಗೂ ನಿಯಮಗಳಂತೆ ಜೀತಪದ್ಧತಿ ನಿರ್ಮೂಲನೆಗೆ ಹಾಗೂ ಕೇಂದ್ರ ಪುರಸ್ಕೃತ ಕಾರ್ಯ ಯೋಜನೆಯಂತೆ ಜೀತ ವಿಮುಕ್ತರುಗಳ ಪುನರ್ವಸತಿಗೆ ಅಗತ್ಯ ಕ್ರಮಗಳನ್ನು ಆದ್ಯತೆ ಮೇರೆ ಕೈಗೊಳ್ಳುವ ಸಲುವಾಗಿ ಪ್ರತಿ ಜಿಲ್ಲಾ ಮಟ್ಟದಲ್ಲಿ ಈ ಕೆಳಕಂಡಂತೆ ತ್ರಿಸದಸ್ಯ ಸಮಿತಿಯನ್ನು ರಚಿಸಲಾಗಿದೆ.

| | |
|---|---|
| 1.ಜಿಲ್ಲಾ ಪಂಚಾಯತಿಯ ಅಧ್ಯಕ್ಷರು | ..ಅಧ್ಯಕ್ಷರು |
| 2.ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ | ..ಸದಸ್ಯರು |
| 3.ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ | ..ಸದಸ್ಯ ಕಾರ್ಯದರ್ಶಿ |

1. ಈ ಸಮಿತಿಯು ತಕ್ಷಣದಿಂದ ಜಾರಿಗೆ ಬರುವಂತೆ ಅಸ್ತಿತ್ವಕ್ಕೆ ಬರತಕ್ಕದ್ದು.
2. ಈ ಸಮಿತಿಯ ಮುಖ್ಯ ಉದ್ದೇಶವು ಜೀತವಿಮುಕ್ತರುಗಳನ್ನು ಜೀತಪದ್ಧತಿಯಿಂದ ಬಿಡುಗಡೆ ಗೊಳಿಸಿದ ಕೂಡಲೇ ಜಿಲ್ಲಾ ಮಟ್ಟದಲ್ಲಿ ವಿವಿಧ ಯೋಜನೆಗಳ ಅಡಿಯಲ್ಲಿ ಲಭ್ಯವಿರುವ ಅನುದಾನವನ್ನು ಕ್ರೋಢೀಕರಿಸಿ ಸೂಕ್ತ ಪುನರ್ವಸತಿ ಸೌಲಭ್ಯಗಳನ್ನು ಅವರಿಗೆ ಕಲ್ಪಿಸುವು

ದಾಗಿರುತ್ತದೆ.

3. ಈ ಸಮಿತಿಯು ಕನಿಷ್ಠ ಪ್ರತಿ ಮೂರು ತಿಂಗಳಿಗೆ ಒಮ್ಮೆ ಸಭೆ ಸೇರಿ, ಜೀತವಿಮುಕ್ತರುಗಳಿಗೆ ಒದಗಿಸಲಾದ ಪುನರ್ವಸತಿ ಸೌಲಭ್ಯಗಳ ಬಗ್ಗೆ ಪ್ರಗತಿ ಪರಿಶೀಲನೆ ನಡೆಸತಕ್ಕದ್ದು.

4. ಈ ಸಮಿತಿಯು ಜೀತಪದ್ಧತಿ ನಿರ್ಮೂಲನೆ ಹಾಗೂ ಜೀತವಿಮುಕ್ತರುಗಳ ಪುನರ್ವಸತಿಗೆ ಕ್ರಮವಾಗಿ ಸಂಬಂಧಿಸಿದ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಹಾಗೂ ಜಿಲ್ಲಾ ಮಟ್ಟದ ಪರಾಮರ್ಶಕ ಸಮಿತಿ ನಡವಳಿಗಳನ್ನು ಪರಿಶೀಲಿಸಿ, ಆ ಸಮಿತಿಗಳಿಗೆ ಸೂಕ್ತ ಮಾರ್ಗದರ್ಶನಗಳನ್ನು ನೀಡತಕ್ಕದ್ದು.

5. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂ.ಗ್ರಾಅಪ.265.ಪಿಬಿಎಸ್.2004 ದಿನಾಂಕ.3.9.2004 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ. ಶಾಮ್‌ಭಟ್)
ನಿರ್ದೇಶಕರು (ಸ್ವ.ಉ.ಕಾ.) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗೊಳಿಸಲು ಕೋರಿ.

ಪ್ರತಿಯನ್ನು:

1. ಮಹಾಲೇಖಪಾಲರು(ಆಡಿಟ್ & ಅಕೌಂಟ್ಸ್), ಕರ್ನಾಟಕ ರಾಜ್ಯ, ಬೆಂಗಳೂರು/ಧಾರವಾಡ.
2. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ/ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷರುಗಳು
5. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು
8. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು / ಆಂತರಿಕ ಆರ್ಥಿಕ ಸಲಹೆಗಾರರು / ಜಂಟಿ ನಿರ್ದೇಶಕರು (ಯೋ.ಉ.ಮೌ.ಕೋಶ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಕಡತ ಪ್ರತಿ.

A:\dist-com.doc